ದೂರವಾಣಿ ಸಂ: 080-22243926
ಫ್ಯಾಕ್ಸ್ ಸಂ: 080-22110134
ವೆಬ್‌ಸೈಟ್: https://kptcl.karnataka.gov.in/
ಇ-ಅಂಚೆ: gmtkptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009.

ಸಂಖ್ಯೆ: ಕವಿಪ್ರನಿನಿ/ಬಿ19/345/85-86 ದಿನಾಂಕ: -6 MAY 2023

## ಸುತ್ತೋಲೆ

**ವಿಷಯ:** ಕರ್ನಾಟಕ ರಾಜ್ಯ ವಿಧಾನಸಭಾ ಚುನಾವಣೆ-2023ರ ಸಂದರ್ಭದಲ್ಲಿ ಅಡಚಣೆರಹಿತ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸುವ ಕುರಿತಂತೆ.

*********

ಕರ್ನಾಟಕ ರಾಜ್ಯ ವಿಧಾನಸಭೆ ಚುನಾವಣೆ-2023ರ ಮತದಾನ ದಿನಾಂಕವು 10ನೇ ಮೇ 2023ರಂದು ನಿಗಧಿಯಾಗಿರುತ್ತದೆ. ಸದರಿ ದಿನಾಂಕದಂದು ರಾಜ್ಯದಾದ್ಯಂತ ವಿವಿಧ ಮತಗಟ್ಟೆಗಳಲ್ಲಿ ಏಕಕಾಲದಲ್ಲಿ ಮತದಾನ ನಡೆಯಲ್ಲಿದ್ದು, ದಿನಾಂಕ: 13.05.2023 ರಂದು ಫಲಿತಾಂಶ ಘೋಷಣೆಯಾಗಲಿದೆ. ದಿನಾಂಕ: 09.05.2023ರಿಂದ ದಿನಾಂಕ 15.05.2023ರವರೆಗೆ ಚುನಾವಣಾ ಕಾರ್ಯಕಲಾಪಗಳನ್ನು ಯಶಸ್ವಿಯಾಗಿ ನಡೆಸಲು ಅಗತ್ಯ ಮೂಲಸೌಕರ್ಯ ಒದಗಿಸಲು ಚುನಾವಣಾ ಆಯೋಗದಿಂದ ನಿರ್ದೇಶನ ನೀಡಲಾಗಿದ್ದು, ಕವಿಪ್ರನಿನಿ ವತಿಯಿಂದ ಅಡಚಣೆರಹಿತ ಸಮರ್ಪಕ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸುವ ಅವಶ್ಯಕತೆಯಿರುತ್ತದೆ.

ಈ ಹಿನ್ನೆಲೆಯಲ್ಲಿ, ಕವಿಪ್ರನಿನಿ ವ್ಯಾಪ್ತಿಯಲ್ಲಿನ ಎಲ್ಲಾ ವಿದ್ಯುತ್ ಸ್ವೀಕರಣಾ/ವಿತರಣಾ ಕೇಂದ್ರಗಳಲ್ಲಿನ ಅಧಿಕಾರಿ/ಸಿಬ್ಬಂದಿಯವರುಗಳು ಹಾಗೂ ನೋಡಲ್ ಅಧಿಕಾರಿಗಳು ಸದರಿ ಅವಧಿಯಲ್ಲಿ ಕೇಂದ್ರ ಸ್ಥಾನಗಳಲ್ಲಿ ಹಾಜರಿದ್ದು, ಅಡಚಣೆರಹಿತ ಸಮರ್ಪಕ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸಲು ಹಾಗೂ ತುರ್ತು ಸಂದರ್ಭವನ್ನು ನಿಭಾಯಿಸಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಪ್ರಸರಣ ವಲಯ, ಅಧೀಕ್ಷಕ ಇಂಜಿನಿಯರುಗಳು (ವಿ), ಪ್ರಸರಣ (ನಿ / ಕಾ&ನಿ) ವೃತ್ತ ಹಾಗೂ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಟಿ.ಎಲ್ & ಎಸ್.ಎಸ್ ವಿಭಾಗರವರುಗಳು ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಮತದಾನ ಕೇಂದ್ರ ಹಾಗೂ ಮತಯಂತ್ರಗಳನ್ನು ಸಂರಕ್ಷಿಸಲ್ಪಡುವ ಕೇಂದ್ರಗಳಿಗೆ ಅಡಚಣೆರಹಿತ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸಲು, ತಮ್ಮ ವ್ಯಾಪ್ತಿಯಲ್ಲಿನ ವಿದ್ಯುತ್ ಸ್ವೀಕರಣಾ / ವಿತರಣಾ ಕೇಂದ್ರಗಳ ಮೇಲ್ವಿಚಾರಣೆ ನಿರ್ವಹಿಸಿ, ಸಂಬಂಧಿಸಿದ ಪಾಳಿ/ನಿರ್ವಹಣಾ ಇಂಜಿನಿಯರುಗಳು ಹಾಗೂ ಸಿಬ್ಬಂದಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಗಳ ಅಧಿಕಾರಿಗಳ ಸಮನ್ವಯದೊಂದಿಗೆ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

6/5/23

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಕವಿಪ್ರನಿನಿ

**ಇವರಿಗೆ:**

1. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಪ್ರಸರಣ ವಲಯ, ಕವಿಪ್ರನಿನಿ.
2. ಎಲ್ಲಾ ಅಧೀಕ್ಷಕ ಇಂಜಿನಿಯರುಗಳು (ವಿ), ಪ್ರಸರಣ (ಕಾ&ನಿ / ನಿ) ವೃತ್ತ, ಕವಿಪ್ರನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ), ಪ್ರಮಾ & ಉ.ಕೇ ವಿಭಾಗ, ಕವಿಪ್ರನಿನಿ.
4. ಕಂಪನಿ ಕಾರ್ಯದರ್ಶಿಗಳು, ಕವಿಪ್ರನಿನಿ, ಬೆಂಗಳೂರು.

5. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ನೋಡಲ್ ಕೇಂದ್ರ, ಕವಿಪ್ರನಿನಿ.
6. ಎಲ್ಲಾ ಸಹಾಯಕ ಇಂಜಿನಿಯರ್ (ವಿ), 220 / 110 / 66 ಕೆ.ವಿ ವಿದ್ಯುತ್ ಸ್ವೀಕರಣಾ / ವಿತರಣಾ ಕೇಂದ್ರ, ಕವಿಪ್ರನಿನಿ.
7. ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಹಣಕಾಸು) / ನಿರ್ದೇಶಕರು (ಪ್ರಸರಣ) / ನಿರ್ದೇಶಕರು (ಆ ಮತ್ತು ಮಾ.ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ನಿರ್ದೇಶಕರುಗಳ ಮುಂದೆ ಮಂಡಿಸಲು.

**ಪ್ರತಿಯನ್ನು:**

ಅಧೀಕ್ಷಕ ಇಂಜಿನಿಯರು (ವಿ), (ಐಟಿ), ಕವಿಪ್ರನಿನಿ ರವರಿಗೆ ಕವಿಪ್ರನಿನಿ ಜಾಲತಾಣದಲ್ಲಿ ಸುತ್ತೋಲೆಯನ್ನು ಪ್ರಕಟಿಸಲು ವ್ಯವಸ್ಥೆ ಮಾಡಲು.